## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿಯ ಸಮರ್ಪಕ ಅಳವಡಿಕೆ ಮತ್ತು ನಿರ್ವಹಣೆಗಾಗಿ ರೂಪುರೇಷೆಗಳನ್ನು ರಚಿಸುವ ಸಲುವಾಗಿ ಸಮಿತಿಯನ್ನು ರಚಿಸುವ ಬಗ್ಗೆ

*******

**ಓದಲಾಗಿದೆ:**

ಸರ್ಕಾರಿ ಆದೇಶ ಸಂಖ್ಯೆ: ಕೃಇ/104/ಕೃಯೋಕಾ/2017, ದಿನಾಂಕ: 07.07.2018.

**ಪ್ರಸ್ತಾವನೆ:**

ಜಲಸಂಪನ್ಮೂಲ ಇಲಾಖೆಯಡಿಯಲ್ಲಿ ಬರುವ ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳಲ್ಲಿ ನೀರಿನ ದಕ್ಷತೆ ಮತ್ತು ಕ್ಷಮತೆಯನ್ನು ಹೆಚ್ಚಿಸಲು ಹಾಗೂ ನೀರಿನ ಸಮರ್ಥನೀಯ ಮತ್ತು ಪರಿಣಾಮಕಾರಿ ಬಳಕೆಯಿಂದ ಪರಿಪೂರ್ಣ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಯೋಜಿಸಲಾಗಿದೆ. ಈಗಾಗಲೇ ಶಿಗ್ಗಾಂವ್ ಏತ ನೀರಾವರಿ ಮತ್ತು ರಾಮಥಾಳ್ ಏತ ನೀರಾವರಿ ಯೋಜನೆಗಳಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿಯನ್ನು ಅಳವಡಿಸಿ ಕಾರ್ಯಗತಗೊಳಿಸಲಾಗಿದೆ.

ರಾಜ್ಯದ ವಿವಿಧ ಇಲಾಖೆಗಳು ಸೂಕ್ಷ್ಮ ನೀರಾವರಿ ಯೋಜನೆಗಳನ್ನು ಬೇರೆ ಬೇರೆ ಮಾದರಿಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಹಿನ್ನಲೆಯಲ್ಲಿ ಸೂಕ್ಷ್ಮ ನೀರಾವರಿ ನೀತಿಯನ್ನು ಸಿದ್ಧಪಡಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ರಚಿತವಾದ ಸಮಿತಿಯು ನೀಡಿರುವ ಶಿಫಾರಸ್ಸಿನ್ವಯ ಕರ್ನಾಟಕ ಸೂಕ್ಷ್ಮ ನೀರಾವರಿ ನೀತಿ–2017ನ್ನು ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಜಾರಿಗೆ ತರಲಾಗಿದೆ.

ರಾಜ್ಯದ ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿಯನ್ನು ಅಳವಡಿಸಲು ಕ್ರಮ ಆರಂಭಿಸಲಾಗಿದ್ದು, ಈ ಯೋಜನೆಗಳಿಗೆ ಒಳಪಡುವ ನೀರಾವರಿ ಕ್ಷೇತ್ರವು ಅಗಾಧವಾಗಿರುತ್ತದೆ. ಆದುದರಿಂದ ಜಲಸಂಪನ್ಮೂಲ ಇಲಾಖೆಯ ನೀರಾವರಿ ಯೋಜನೆಗಳಲ್ಲಿ ಕಾರ್ಯಗತಗೊಳಿಸುತ್ತಿರುವ/ ಕಾರ್ಯಗತಗೊಳಿಸುವ ಸೂಕ್ಷ್ಮ ನೀರಾವರಿ ಪದ್ಧತಿಗಳ ಸಮರ್ಪಕ ಅನುಷ್ಠಾನ ಮತ್ತು ನಿರ್ವಹಣೆಗೆ ರೂಪುರೇಷಗಳನ್ನು ರಚಿಸಲು ಜಲಸಂಪನ್ಮೂಲ ಇಲಾಖೆಯಲ್ಲಿ ಒಂದು ಸಮಿತಿಯನ್ನು ರಚಿಸುವುದು ಅವಶ್ಯವೆಂದು ಅಭಿಪ್ರಾಯ ಪಡಲಾಗಿದ್ದು, ಈ ಹಿನ್ನಲೆಯಲ್ಲಿ ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 184 ವಿಬ್ಯಾಇ 2017 ಬೆಂಗಳೂರು, ದಿನಾಂಕ: 19.10.2019**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಜಲಸಂಪನ್ಮೂಲ ಇಲಾಖೆಯ ನೀರಾವರಿ ಯೋಜನೆಗಳಲ್ಲಿ ಕಾರ್ಯಗತಗೊಳಿಸುತ್ತಿರುವ/ ಕಾರ್ಯಗತಗೊಳಿಸುವ ಸೂಕ್ಷ್ಮ ನೀರಾವರಿ ಪದ್ಧತಿಗಳ ಸಮರ್ಪಕ ಅನುಷ್ಠಾನ ಮತ್ತು

ನಿರ್ವಹಣೆಗೆ ರೂಪುರೇಷೆಗಳನ್ನು ರಚಿಸುವ ಸಲುವಾಗಿ ಈ ಕೆಳಕಂಡ ಸಮಿತಿಯನ್ನು ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಚಿಸಿ ಆದೇಶಿಸಲಾಗಿದೆ.

| ಕ್ರಮ. ಸಂ. | ಅಧಿಕಾರಿ ಸದಸ್ಯರು | |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ | ಸದ್ಯಸರು |
| 3 | ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ | ಸದಸ್ಯರು |
| 4 | ಸರ್ಕಾರದ ಕಾರ್ಯದರ್ಶಿಗಳು ಕೃಷಿ ಇಲಾಖೆ | ಸದಸ್ಯರು |
| 5 | ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ | ಸದಸ್ಯರು |
| 6 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ | ಸದಸ್ಯರು |
| 7 | ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲನಿಗಮ ನಿಯಮಿತ | ಸದಸ್ಯರು |
| 8 | ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ | ಸದಸ್ಯರು |
| 9 | ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ | ಸದಸ್ಯರು |
| 10 | ನಿರ್ದೇಶಕರು, ಕಾಡಾ ನಿರ್ದೇಶನಾಲಯ | ಸದಸ್ಯರು |
| 11 | ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ | ಸದಸ್ಯ ಕಾರ್ಯದರ್ಶಿ |

ಮೇಲ್ಕಂಡ ಸಮಿತಿಯು ಈಗಾಗಲೇ ಜಾರಿಗೆ ತರಲಾಗಿರುವ ಕರ್ನಾಟಕ ರಾಜ್ಯ ಸೂಕ್ಷ್ಮ ನೀರಾವರಿ ನೀತಿ 2017ನ್ನು ಗಮನದಲ್ಲಿರಿಸಿಕೊಂಡು ಈ ಕೆಳಕಂಡ ಕಾರ್ಯಭಾರವನ್ನು ನಿರ್ವಹಿಸುವುದು:-

i) ಕರ್ನಾಟಕ ರಾಜ್ಯದ ಸೂಕ್ಷ್ಮ ನೀರಾವರಿ ನೀತಿ-2017ಅನ್ವಯ ಜಲಸಂಪನ್ಮೂಲ ಇಲಾಖೆಯಡಿ ಬರುವ ನೀರಾವರಿ ಯೋಜನೆಗಳಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿ ಅಳವಡಿಕೆ ಹಾಗೂ ನಿರ್ವಹಣೆಗೆ ರೂಪುರೇಷೆ ರೂಪಿಸುವುದು ಹಾಗೂ ಶಿಫಾರಸ್ಸು ಮಾಡುವುದು.

ii) ರಾಜ್ಯದ ನೀರಾವರಿ ನಿಗಮಗಳಲ್ಲಿ ಚಾಲ್ತಿಯಲ್ಲಿರುವ ಮತ್ತು ಅನುಷ್ಠಾನ ಮಾಡಲಾಗುತ್ತಿರುವ/ಮಾಡಲಾಗುವ ಸೂಕ್ಷ್ಮ ನೀರಾವರಿ ಯೋಜನೆಗಳಲ್ಲಿ, ಸೂಕ್ಷ್ಮ ನೀರಾವರಿ ಪದ್ಧತಿಗೆ ಸಂಬಂಧಿಸಿದ ಮೂಲಭೂತ ಸೌಕರ್ಯಗಳ (ಮುಖ್ಯ ಕಾಲುವೆ, ಶಾಖಾ ಕಾಲುವೆ, ಒತ್ತಡದ ಮೂಲಕ ನೀರಾವರಿ ಜಾಲದ ಘಟಕಗಳ (Components of Pressurized Irrigation Network) ಉಸ್ತುವಾರಿಯನ್ನು ರೈತರ ಸಹಭಾಗಿತ್ವದಲ್ಲಿ ಮಾಡುವ ಬಗ್ಗೆ ಪರಿಶೀಲಿಸಿ ನೀತಿಯನ್ನು ರೂಪಿಸುವುದು. ಇದಕ್ಕಾಗಿ ನೀರು ಬಳಕೆದಾರರ ಸಂಘಗಳನ್ನು ಕಾಲಮಿತಿಯಲ್ಲಿ ಸ್ಥಾಪಿಸುವ ಬಗ್ಗೆ ಹಾಗೂ ಸಂಘಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ವರದಿ ನೀಡುವುದು.

iii) ಸೂಕ್ಷ್ಮ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಿದ ನಂತರ ಸೂಕ್ಷ್ಮ ನೀರಾವರಿಗೆ ಸಂಬಂಧಿಸಿದ ಭಾಗಗಳನ್ನು (ಡ್ರಿಪ್ಪರ್ಸ್, ವಾಲ್ವ್ಸ್ ಇತ್ಯಾದಿ) ಕೆಲ ವರ್ಷಗಳಿಗೊಮ್ಮೆ ಬದಲಾಯಿಸಬೇಕಿದ್ದು, ಇದಕ್ಕೆ ತಗಲುವ ವೆಚ್ಚವನ್ನು ರೈತರ ಸಹಭಾಗಿತ್ವದಲ್ಲಿ ಸಿಂಕಿಂಗ್ ಫಂಡ್ ಕಾಣಿಕೆ (Contribution to Sinking Fund) ಅಥವಾ ಇನ್ನಿತರ ವ್ಯವಸ್ಥೆಯ ಮೂಲಕ ನಿರ್ವಹಿಸಲು ಪರಿಶೀಲಿಸಿ ವರದಿ ನೀಡುವುದು.

iv) ಪೂರ್ಣಗೊಂಡ ಸೂಕ್ಷ್ಮ ನೀರಾವರಿ ಯೋಜನೆಗಳು ಯಾವುದೇ ಅಡೆತಡೆಯಿಲ್ಲದೆ ಕಾರ್ಯ ನಿರ್ವಹಿಸಲು ಮತ್ತು ಯೋಜನೆಯ ಮೂಲ ಉದ್ದೇಶ ಸಫಲಗೊಳಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ವರದಿ ನೀಡುವುದು.

v) ರಾಜ್ಯದ ಸೂಕ್ಷ್ಮ ನೀರಾವರಿ ನೀತಿಯನ್ನು ಅನುಷ್ಠಾನಗೊಳಿಸಲು ತಂತ್ರಜ್ಞಾನ ಮತ್ತು ಮಾರ್ಗೋಪಾಯಗಳನ್ನು ಗುರುತಿಸುವುದು ಹಾಗೂ ಸೂಕ್ತ ಸೂಕ್ಷ್ಮ ನೀರಾವರಿ ತಂತ್ರಜ್ಞಾನದ ಬಳಕೆಗೆ ಶಿಫಾರಸ್ಸು ಮಾಡುವುದು.

vi) ಸೂಕ್ಷ್ಮ ನೀರಾವರಿ ಪದ್ಧತಿಯನ್ನು ಕೃಷಿ ಹಾಗೂ ತೋಟಗಾರಿಕೆಯಲ್ಲಿ ಬಳಕೆ ಮಾಡಿ ಸಮರ್ಥವಾಗಿ ಬಳಸುವ ಮಾರ್ಗೋಪಾಯಗಳನ್ನು ಗುರುತಿಸುವುದು ಹಾಗೂ ಶಿಫಾರಸ್ಸು ಮಾಡುವುದು.

vii) ಸೂಕ್ಷ್ಮ ನೀರಾವರಿ ಯೋಜನೆಯ ಕಾರ್ಯಸಾಧ್ಯತೆಯ ಪರಿಶೀಲನೆಯ mechanismಅನ್ನು ಗುರುತಿಸುವುದು ಹಾಗೂ ಸೂಕ್ಷ್ಮ ನೀರಾವರಿ ಮತ್ತು ಸಾಂಪ್ರದಾಯಿಕ ನೀರಾವರಿ ಪದ್ಧತಿಗಳ ವೆಚ್ಚ ಹೋಲಿಕೆ ಹಾಗೂ ಸೂಕ್ಷ್ಮ ನೀರಾವರಿಗಾಗಿ ತಗಲುವ ವೆಚ್ಚದ ಪರಿಶೀಲನೆಯ mechanismಅನ್ನು ಸೂಚಿಸುವುದು.

viii) ಹೆಚ್ಚಿನ ನೀರಿನ ಅವಶ್ಯಕತೆ ಇರುವ ಬೆಳೆಗಳಾದ ಕಬ್ಬು, ಭತ್ತ, ಬಾಳೆಹಣ್ಣು, ಹಣ್ಣು, ಮತ್ತು ತರಕಾರಿ ಮುಂತಾದ ಬೆಳಗಳ ಕೃಷಿಗೆ ಸೂಕ್ಷ್ಮ ನೀರಾವರಿ ಪದ್ಧತಿ ಅಳವಡಿಕೆಗಾಗಿ ಸೂಕ್ತ ವಿಧಾನಗಳನ್ನು ಸೂಚಿಸುವುದು.

ix) ಭವಿಷ್ಯದಲ್ಲಿ ಕೃಷಿ ಮತ್ತು ತೋಟಗಾರಿಕೆಗಾಗಿ ನೀರಿನ ಲಭ್ಯತೆಯನ್ನು ಉಳಿಸಿಕೊಳ್ಳುವ ಉದ್ದೇಶದಿಂದ ದೀರ್ಘಾವಧಿ ದೃಷ್ಟಿಕೋನದ ನೀರಿನ ಉಳಿತಾಯ ತಂತ್ರಜ್ಞಾನಗಳ ವಿವೇಕಯುತ ಬಳಕೆಗಾಗಿ ಯೋಜಿತ ರೇಖಾಚಿತ್ರವನ್ನು ಒದಗಿಸುವುದು.

ಸಮಿತಿಯು ಜರುಗಿಸುವ ಸಭೆಗಳಿಗೆ ಅಗತ್ಯವಿದ್ದಲ್ಲಿ ವಿಷಯ ತಜ್ಞರನ್ನು ಅಮಂತ್ರಿಸಬಹುದಾಗಿದ್ದು, ಆಮಂತ್ರಿತ ಅಧಿಕಾರೇತರ ವಿಶೇಷ ತಜ್ಞರಿಗೆ ಚಾಲ್ತಿಯಲ್ಲಿರುವ ನಿಯಮಾವಳಿಯನುಸಾರ ಭತ್ಯೆ/ಸಂಭಾವನೆಯನ್ನು ನೀಡುವುದು ಮತ್ತು ಸಮಿತಿಗೆ ಸಂಬಂಧಿತ ವಿವಿಧ ವೆಚ್ಚಗಳನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

19/10/2019

(ಎಸ್.ಎನ್.ಕೇಶವಪ್ರಕಾಶ್)
ಸರ್ಕಾರದ ವಿಶೇಷ ಕರ್ತವ್ಯಾಧಿಕಾರಿ (ತಾಂತ್ರಿಕ-4),
ಜಲ ಸಂಪನ್ಮೂಲ ಇಲಾಖೆ.

Kala 19/10/19

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಗೊಳಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

**ಪ್ರತಿಯನ್ನು:**

1) ಮಹಾಲೇಖಪಾಲರು (ಎ & ಇ) ಕರ್ನಾಟಕ , ಬೆಂಗಳೂರು.

2) ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಬೆಂಗಳೂರು.
3) ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
4) ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ.
6) ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ.
7) ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
8) ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ.
9) ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ.
10) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ.
11) ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ.
12) ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ.
13) ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ
14) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ (ಉತ್ತರ), ಬೆಳಗಾವಿ.
15) ನಿರ್ದೇಶರಕು, ಕಾಡಾ, ರಾಜಾಜಿನಗರ, ಬೆಂಗಳೂರು.
16) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.